ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/06/ಇಸಿಎಸ್(1)/2023

ಆಯುಕ್ತರವರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com
ದಿನಾಂಕ:19.12.2023

## ಸುತ್ತೋಲೆ

ವಿಷಯ: ಡಿಸೆಂಬರ್ 2023 ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷಾ ಕೇಂದ್ರಕ್ಕೆ ಜೋಡಣೆಯಾದ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳು ಅನುಸರಿಸಬೇಕಾದ ಕ್ರಮಗಳ ಕುರಿತು.
ಉಲ್ಲೇಖ: ಈ ಕಚೇರಿ ಸುತ್ತೋಲೆ ಸಂಖ್ಯೆ: :ಬಿಟಿಇ/06/ಇಸಿಎಸ್(1)/2023 ದಿನಾಂಕ:06.12.2023

***********

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, ಡಿಸೆಂಬರ್ 2023 ರ ಡಿಪ್ಲೋಮ ಸೆಮಿಸ್ಟರ್ C-03,C-09 & C-15 ಮತ್ತು C-20ಪಠ್ಯಕ್ರಮಗಳಲ್ಲಿನ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಾಚಾರ್ಯರು/ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರು/ ಉಪಮುಖ್ಯ ಅಧೀಕ್ಷಕರು/ ಕೊಠಡಿ ಮೇಲ್ವಿಚಾರಕರುಗಳು ಗಮನಿಸಬೇಕಾದ/ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಉಲ್ಲೇಖದ ಸುತ್ತೋಲೆಯಲ್ಲಿ ತಿಳಸಲಾಗಿತ್ತು.

ಮುಂದುವರೆದು ಪರೀಕ್ಷಾ ಕೇಂದ್ರಕ್ಕೆ ಜೋಡಣೆಯಾದ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳು (C-03,C-09 & C-15 ಮತ್ತು C-20ಪಠ್ಯಕ್ರಮಗಳಲ್ಲಿನ ಪಠ್ಯಕ್ರಮದ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ) ಪರೀಕ್ಷೆಗಳನ್ನು ಸಮರ್ಪಕವಾಗಿ ನಡೆಸಲು ಅಗತ್ಯ ಸಿಬ್ಬಂದಿ/ಕೊಠಡಿ ಮೇಲ್ವಿಚಾರಕರು (ಕನಿಷ್ಠ 20 ವಿದ್ಯಾರ್ಥಿಗಳಿಗೆ ಒಬ್ಬರಂತೆ) / ಗಣಕಯಂತ್ರ- ಪ್ರಿಂಟರ್ಸ್ ಹಾಗೂ ಸ್ಟೇಷನರಿ ಇತರೆ ಸೌಲಭ್ಯ/ ಸಂಪನ್ಮೂಲಗಳನ್ನು ಒದಗಿಸುವಂತೆ ಸೂಚಿಸಲಾಗಿತ್ತು. ಆದಾಗ್ಯೂ ಕೆಲವೊಂದು ಪಾಲಿಟೆಕ್ನಿಕ್ ಸಂಸ್ಥೆಗಳು ಈ ನಿಟ್ಟಿನಲ್ಲಿ ಸೂಕ್ತ ಸಹಕಾರ ನೀಡದಿರುವದರಿಂದ ಪರೀಕ್ಷಾ ಕಾರ್ಯಗಳಿಗೆ ತೊಂದರೆಯುಂಟಾಗಿರುತ್ತದೆ.

ಪ್ರಯುಕ್ತ ಸಂಬಂಧಿಸಿದ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಿನ್ಸಿಪಾಲರುಗಳು ಈ ಕೂಡಲೇ ಅಗತ್ಯ ಕಾಳಜಿ ವಹಿಸಿ ಪರೀಕ್ಷಾ ಕಾರ್ಯಗಳನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ತಿಳಸಲಾಗಿದೆ. ತಪ್ಪಿದಲ್ಲಿ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದೆಂದು ತಿಳಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

1. ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು/ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು (C-03,C-09 & C-15 ಮತ್ತು C-20 ಪಠ್ಯಕ್ರಮ)- ಅಗತ್ಯ ಕ್ರಮಕ್ಕಾಗಿ
2. ಖಾಸಗಿ ಅನುದಾನಿತ/ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು /ಪರೀಕ್ಷಾ ಕಾರ್ಯಗಳ ಮುಖ್ಯ ಅಧೀಕ್ಷಕರುಗಳು (C-20 ಪಠ್ಯಕ್ರಮ)

ಪ್ರತಿ:

1. ನೋಡಲ್ ಕೇಂದ್ರದ ನೋಡಲ್ ಅಧಿಕಾರಿಗಳು/ ಶಿಬಿರಾಧಿಕಾರಿಗಳು/ಸಹಾಯಕ ಶಿಬಿರಾಧಿಕಾರಿಗಳು/ ಕೋಡಿಂಗ್ ಅಧಿಕಾರಿಗಳು –ಮಾಹಿತಿಗಾಗಿ
2. ಆಪ್ತಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
3. ಆಪ್ತಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ, ತಾಂತ್ರಿಕ ಶಿಕ್ಷಣ ಭವನ
4. ಆಪ್ತಶಾಖೆ, ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳ
5. ಕಂಪ್ಯೂಟರ್ ಕೇಂದ್ರ – ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
6. ಇ- ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು